**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ/12/ಎಸಿಎಂ(2)/2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 19-06-2017.

## -:: ಸುತ್ತೋಲೆ ::-

**ವಿಷಯ:** 2017-18ನೇ ಸಾಲಿನ ಪ್ರಥಮ ಡಿಪ್ಲೋಮಾ ನಾನ್ ಇಂಜಿನಿಯರಿಂಗ್ ಕೋರ್ಸ್ ಆದ **ಲೈಬ್ರರಿ ಸೈನ್ಸ್ ಪ್ರವೇಶಕ್ಕೆ** ಸಂಬಂಧಿಸಿದಂತೆ ಅರ್ಜಿಗಳ ವಿತರಣೆ ಮತ್ತು ಸ್ವೀಕರಿಸಲು ಅವಧಿ ವಿಸ್ತರಿಸುವ ಬಗ್ಗೆ.

**ಉಲ್ಲೇಖ:** 1. ಈ ಕಛೇರಿ ಸಮ ಸಂಖ್ಯೆ ಪ್ರವೇಶಾಧಿಸೂಚನೆ ದಿನಾಂಕ:16-05-2017.
2. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಸಮಪಾ/01/ಪ್ರವೇಶ/2017-18/163, ದಿ:07-06-2017.

-00000000-

2017-18ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(1)ರಲ್ಲಿ ಈಗಾಗಲೇ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಅರ್ಜಿ ವಿತರಣೆ ಮತ್ತು ಸ್ವೀಕೃತಿ ಬಗ್ಗೆ ಅಧಿಸೂಚನೆಯನ್ನು ನೀಡಲಾಗಿತ್ತು ಈ ಸಂಬಂಧದಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸುವ ಅಂತಿಮ ದಿನಾಂಕವನ್ನು 25-05-2017 ಎಂದು ನಿಗಧಿಪಡಿಸಿ ಡಿಪ್ಲೋಮಾ ಪ್ರವೇಶ ಪ್ರಕ್ರಿಯೆಯನ್ನು ಆಫ್-ಲೈನ್ ಮುಖಾಂತರ ಪ್ರಾಂಶುಪಾಲರು ತಮ್ಮ ಹಂತದಲ್ಲಿಯೇ **ದಿ:31-05-2017** ರೊಳಗೆ ಪೂರ್ಣಗೊಳಿಸಲು ತಿಳಿಸಲಾಗಿರುತ್ತದೆ.

ಉಲ್ಲೇಖ(2)ರ ಪ್ರಿನ್ಸಿಪಾಲರು ತಮ್ಮ ಸಂಸ್ಥೆಯಲ್ಲಿನ ದ್ವಿತೀಯ ಪಿಯುಸಿ ವಿದ್ಯಾರ್ಹತೆಗೆ ಅನುಗುಣವಾಗಿ ನಾನ್ ಇಂಜಿನಿಯರಿಂಗ್ ಕೋರ್ಸ್ ಆದ ಲೈಬ್ರರಿ ಸೈನ್ಸ್ ಪ್ರವೇಶಕ್ಕೆ ಸಂಬಂಧಿಸಿದಂತೆ ಅತೀ ಕಡಿಮೆ ಅರ್ಜಿಗಳು ಸ್ವೀಕೃತವಾಗಿರುವುದು, ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಅಂತಿಮ ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ. ಈ ಸಂಬಂಧದಲ್ಲಿ ಪ್ರಿನ್ಸಿಪಾಲರ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಲೈಬ್ರರಿ ಸೈನ್ಸ್ ಕೋರ್ಸಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಈ ಕೆಳಕಂಡಂತೆ ಅನುಮತಿ ನೀಡಲಾಗಿದೆ.

1. **ಅರ್ಜಿ ಪಡೆಯಲು ವಿಸ್ತರಿಸಲಾದ ದಿ30-06-2017ರ ಸಂಜೆ 5:30 ಗಂಟೆಯವರೆಗೆ**
2. **ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ದಿ:30-06-2017ರ ಸಂಜೆ 5:30 ಗಂಟೆಯೊಳಗೆ**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ ದಿ:30-06-2017 ರೊಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಪೂರ್ಣಗೊಳಿಸಲು ತಿಳಿಸಲಾಗಿದೆ.

ನಿರ್ದೇಶಕರು

**ಇವರಿಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಮಂಗಳೂರು
3. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹಾಸನ

} **ಮೇಲ್ಕಂಡ ಪರಿಷ್ಕೃತ ಪ್ರವೇಶ ವೇಳಾ ಪಟ್ಟಿಯು ಕೇವಲ ಲೈಬ್ರರಿ ಸೈನ್ಸ್ ಕೋರ್ಸಿಗೆ ಮಾತ್ರ ಅನ್ವಯವಾಗುವಂತೆ ಕ್ರಮತೆಗೆದುಕೊಳ್ಳುವುದು**

File 12-17(2nd PUC Adm)